**ಸಾಕ್ಷಿಗೆ ದಿನಾಂಕಃ 28.03.2026 ರಂದು ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ ಶ್ರೀ. ಬಿ.ಎಂ.ಎನ್. ವಕೀಲರಿಂದಃ**

ಮೃತ ವಾದಿ ಮತ್ತು ಮೃತ ಬಸಪ್ಪನವರ ಕುಟುಂಬಕ್ಕೆ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿ. ಮೃತ ವಾದಿಯು ಎಷ್ಟು ಜನರ ವಿರುದ್ಧ ಈ ದಾವೆಯನ್ನು ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. 1 ರಿಂದ 5 ನೇ ಪ್ರತಿವಾದಿಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತಿನ ಚೆಕ್ಕು ಬಂದಿ ನನಗೆ ಗೊತ್ತು. ದಾವಾ ಸ್ವತ್ತಿನ ಉತ್ತರ ದಿಕ್ಕಿನಲ್ಲಿ ನನ್ನ ಸ್ವತ್ತು ಬರುತ್ತದೆ. ಸರ್ವೆ ನಂ.190/1 ರಂಗದಾಸಯ್ಯ ನವರ ಹೆಸರಿನಲ್ಲಿ ಇರುತ್ತದೆ. ಅವರು ನನಗೆ ತಾತನಾಗಬೇಕು. ಆರ್.ಟಿ.ಸಿಯನ್ನು ಹಾಜರುಪಡಿಸಿರುವುದಿಲ್ಲ. ನನ್ನ ಸ್ವತ್ತಿನ ಪೂರ್ವಕ್ಕೆ ರುದ್ರಪ್ಪ ಬಸಪ್ಪನವರ ಜಮೀನು ಬರುತ್ತದೆ. ಪಶ್ಚಿಮಕ್ಕೆ ರಸ್ತೆ, ಉತ್ತರ ಮತ್ತು ದಕ್ಷಿಣಕ್ಕೆ ನಾಗೇಂದ್ರ ಪ್ರಸಾದ್ ರವರ ಜಮೀನು ಬರುತ್ತದೆ. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ದಾಖಲೆಗಳನ್ನು ನಾನು ನೋಡಿರುವುದಿಲ್ಲ. ಮೃತ ಮಾದಯ್ಯ ತೀರಿಕೊಂಡು 10 ವರ್ಷ ಆಗಿರುತ್ತದೆ. ಮೃತ ಮಾದಯ್ಯ ನವರಿಗೆ ಇಬ್ಬರು ಗಂಡು ಮಕ್ಕಳು, ಹೆಣ್ಣು ಮಕ್ಕಳು ಇರುವುದಿಲ್ಲ. ನನಗೆ ಓದಲು ಬರೆಯಲು ಬರುವುದಿಲ್ಲ.

ದಾವಾ ಸ್ವತ್ತನ್ನು 1 ನೇ ಪ್ರತಿವಾದಿಯು ಹರಾಜಿನ ಮೂಲಕ ಖರೀದಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸರ್ವೆ ನಂ.151/1, 151/2, 151/3 ಎ ಗಳನ್ನು 3 ನೇ ಪ್ರತಿವಾದಿಯು ದಿ.05.05.2011 ರಂದು ಖರೀದಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಸ್ವತ್ತುಗಳು 3 ನೇ ಪ್ರತಿವಾದಿಯ ಸ್ವಾಧೀನದಲ್ಲಿ ಇರುತ್ತವೆ ಎಂದರೆ ನನಗೆ ಗೊತ್ತಿಲ್ಲ. ವಾದಿಗಳು ದಾವಾ ಸ್ವತ್ತಿನ ಸ್ವಾಧೀನಾನುಭವದಲ್ಲಿ ಇಲ್ಲದೆ ಇದ್ದರೂ ಹಾಗೂ ದಾವಾ ವಿಚಾರಗಳು ನನಗೆ ಗೊತ್ತಿಲ್ಲದೆ ಇದ್ದರೂ ವಾದಿಗಳಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

(3 ನೇ ಪ್ರತಿವಾದಿ ಪರ ವಕೀಲರು ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.)
ಮರು ವಿಚಾರಣೆ ಇರುವುದಿಲ್ಲ.

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**